ವಿಜಯವಾಣಿ
ಕನ್ನಡಿಗರ ಧ್ವನಿ

**Sunday 26th February 2023, Page No.5B**

**VTU: 44 students of RV College research department have received doctorate degrees**

# ಆರ್‌ವಿ ಕಾಲೇಜಿನ 44 ಮಂದಿಗೆ ಡಾಕ್ಟರೇಟ್

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ರಾಷ್ಟ್ರೀಯ ವಿದ್ಯಾಲಯದ ಸಂಶೋಧನಾ ವಿಭಾಗದ 44 ವಿದ್ಯಾರ್ಥಿಗಳು ಡಾಕ್ಟರೇಟ್ ಪದವಿ ಸ್ವೀಕರಿಸಿದ್ದಾರೆ.

ರಾಷ್ಟ್ರೀಯ ವಿದ್ಯಾಲಯದ ತಾಂತ್ರಿಕ ಶಿಕ್ಷಣದ ಪ್ರಾಂಶುಪಾಲ ಡಾ.ಕೆ.ಎನ್. ಸುಬ್ರಹ್ಮಣ್ಯ ಮಾತನಾಡಿ, ದೇಶದಲ್ಲಿ ಆರ್.ವಿ. ಕಾಲೇಜ್ ಆಫ್ ಇಂಜಿನಿಯರಿಂಗ್ ತಾಂತ್ರಿಕ ಶಿಕ್ಷಣ ಕ್ಷೇತ್ರದಲ್ಲಿ ಹೆಚ್ಚು ಹೆಸರು ಮಾಡಿದೆ. 1963ರಲ್ಲಿ ರಾಷ್ಟ್ರೀಯ ಶಿಕ್ಷಣ ಸೇವಾ ಸಂಸ್ಥೆ ವತಿಯಿಂದ ಪ್ರಾರಂಭವಾದ ಈ ಸಂಸ್ಥೆ, ಅನೇಕ ಮೈಲಿಗಲ್ಲು ದಾಟಿ ಭಾರತದ ಇತಿಹಾಸದಲ್ಲಿ ತನ್ನದೇ ಆದ ಛಾಪು ಮೂಡಿಸಿದೆ ಎಂದು ಬಣ್ಣಿಸಿದರು.

» **ವಿಶ್ವೇಶ್ವರಯ್ಯ ತಾಂತ್ರಿಕ ವಿವಿ ಘಟಿಕೋತ್ಸವದಲ್ಲಿ ಪ್ರದಾನ**

ಪ್ರಸ್ತುತ ವರ್ಷವೂ ನಮ್ಮ ಶಿಕ್ಷಣ ಸಂಸ್ಥೆಗೆ ವಿಶಿಷ್ಟವಾದ ವರ್ಷವಾಗಿದೆ. ವಿವಿಯು ಸಂಶೋಧನೆಗೆ ಹೆಚ್ಚು ಒತ್ತು ನೀಡುತ್ತಿದೆ. ಸಂಸ್ಥೆಯ ಆಡಳಿತ ಮಂಡಳಿ ಸಹ ಸಂಶೋಧನಾ ವಿಭಾಗವನ್ನು ಹೆಚ್ಚು ಸದೃಢ ಮಾಡುವ ನಿಟ್ಟಿನಲ್ಲಿ ಮುನ್ನಡೆ ಸಾಧಿಸಲು ಕಂಕಣ ಬದ್ಧವಾಗಿದೆ ಎಂದರು. ವಿವಿಯ ವಿದ್ಯಾರ್ಥಿಗಳ ಸಾಧನೆ ಬಗ್ಗೆ ಮುಕ್ತ ಕಂಠದಿಂದ ಅವರು ಶ್ಲಾಘಿಸಿದರು.

ಆರ್.ವಿ.ಕಾಲೇಜ್ ಆಫ್ ಇಂಜಿನಿಯರಿಂಗ್‌ನ ಮೆಕ್ಯಾನಿಕಲ್ ಇಂಜಿನಿಯರಿಂಗ್ ವಿಭಾಗದ ಸಹಾಯಕ ಪ್ರಾಧ್ಯಾಪಕ ಮಹಾಂತೇಶ್ ಮಠ ಡಾಕ್ಟರೇಟ್ ಪದವಿ ಸ್ವೀಕರಿಸಿ, ಸಂಸ್ಥೆಯಿಂದ ಸಂಶೋಧನಾ ವಿದ್ಯಾರ್ಥಿಗಳನ್ನು ತಯಾರು ಮಾಡುತ್ತಿರುವ ಕುರಿತು ಮಾತನಾಡಿದರು.



ವಿಟಿಯು ಘಟಿಕೋತ್ಸವದಲ್ಲಿ ಡಾಕ್ಟರೇಟ್ ಪದವಿ ಸ್ವೀಕರಿಸಿದ ರಾಷ್ಟ್ರೀಯ ವಿದ್ಯಾಲಯದ ವಿದ್ಯಾರ್ಥಿಗಳು.